**ಕರ್ನಾಟಕ ಸರ್ಕಾರ ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ ನೃಪತುಂಗ ರಸ್ತೆ, ಬೆಂಗಳೂರು 01**

ಸಂಖ್ಯೆ: ಸಿ4(6).ಸ.ಪ್ರೌ.ಶಾ/ಎಸ್.ಎಸ್.ಎಲ್.ಸಿ.ಫಲಿತಾಂಶ.-36/2019-20 ದಿನಾಂಕ: 24.10.2019

-: ಸುತ್ತೋಲೆ:-

ವಿಷಯ:- ರಾಜ್ಯದ ಎಲ್ಲಾ ಪ್ರೌಢಶಾಲೆಗಳಲ್ಲಿ ಎಸ್.ಎಸ್.ಎಲ್.ಸಿ.ಫಲಿತಾಂಶವನ್ನು ಉತ್ತಮಗೊಳಿಸಲು ತೆಗೆದುಕೊಂಡಿರುವ ವಿನೂತನ ಕಾರ್ಯಕ್ರಮಗಳ ಬಗ್ಗೆ

ಉಲ್ಲೇಖ:- 1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳ ಟಿಪ್ಪಣಿ ಸಂಖ್ಯೆ: P.S.E.S.M./PS/1429/2019-20 ದಿನಾಂಕ: 18.10.2019

2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಇವರ ಅ.ಸ.ಪತ್ರ ಸಂಖ್ಯೆ: ಆ.ಆಶಾ.ಇತರೆ:2019-20 ದಿನಾಂಕ: 16.10.2019

* * * * * *

ಶಿಕ್ಷಣದ ಮೂಲ ಉದ್ದೇಶ ವಿದ್ಯಾರ್ಥಿಯ ಸರ್ವಾಂಗೀಣ ಬೆಳವಣಿಗೆಯಾಗಿದೆ. ಒಂದು ದೇಶದ ಪ್ರಗತಿಯಲ್ಲಿ ಮತ್ತು ಉತ್ತಮ ಪ್ರಜೆಗಳಾಗುವುದರಲ್ಲಿ ಶಿಕ್ಷಣದ ಪಾಲು ಪ್ರಮುಖವಾದುದು. ಉತ್ತಮ ಸಮಾಜದ ನಿರ್ಮಾಣ ಕೇವಲ ಗುಣಮಟ್ಟದ ಶಿಕ್ಷಣದಿಂದ ಮಾತ್ರ ಸಾಧ್ಯ. ಈ ಅಂಶವನ್ನು ಮನಗಂಡಿರುವ ಸರ್ಕಾರ ವಿದ್ಯಾರ್ಥಿಗಳಲ್ಲಿ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಹಲವು ಗುಣಾತ್ಮಕ ಯೋಜನೆಗಳನ್ನು ಜಾರಿಗೆ ತಂದಿರುತ್ತದೆ.

ಶಿಕ್ಷಕರ ಬೋಧನಾ ಮತ್ತು ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯವನ್ನು ಶೈಕ್ಷಣಿಕ ವರ್ಷಾಂತ್ಯದಲ್ಲಿ ಪರೀಕ್ಷೆಗಳನ್ನು ನಡೆಸಿ ಮೌಲ್ಯ ಮಾಪನದ ಮೂಲಕ ಅರಿಯಲಾಗುತ್ತದೆ. ಪರೀಕ್ಷೆ ಒಂದು ಯುದ್ಧವಲ್ಲ ಅದೊಂದು ಜೀವನದ ಹಂತ ಎಂಬ ಆತ್ಮಸ್ಥೈರ್ಯ ವಿದ್ಯಾರ್ಥಿಗಳಿಗೆ ಮೂಡಬೇಕು. ವಿದ್ಯಾರ್ಥಿಗಳ ಮುಂದಿನ ವಿದ್ಯಾಭ್ಯಾಸ ಕ್ಷೇತ್ರ ಹಾಗೂ ಗುರಿ ತೀರ್ಮಾನವಾಗುವ ಮಹತ್ವದ ತಿರುವು ಪರೀಕ್ಷೆ. ಈ ಸಂದರ್ಭದಲ್ಲಿ ಆತ್ಮ ವಿಶ್ವಾಸದಿಂದ ಪರೀಕ್ಷೆಯನ್ನು ಎದುರುಸುವ ಸಾಮರ್ಥ್ಯವನ್ನು ಎಲ್ಲಾ ವಿದ್ಯಾರ್ಥಿಗಳಲ್ಲಿ ಮೂಡಿಸಬೇಕಾದ ಗುರುತರವಾದ ಜವಾಬ್ದಾರಿ ಇಲಾಖೆ ಹೊಂದಿರುತ್ತದೆ. ಈ ಹಂತದಲ್ಲಿ ವಿದ್ಯಾರ್ಥಿಗಳು 8ನೇ ಮತ್ತು 9ನೇ ತರಗತಿಗಳ ಕಲಿಕೆಯ ನಂತರ ಮುಂದಿನ ವಿದ್ಯಾಭ್ಯಾಸ ಅಥವಾ ಗುರಿಯನ್ನು ನಿರ್ಧರಿಸುವ ಪ್ರೌಢ ಶಿಕ್ಷಣದ ಅಂತಿಮ ಹಂತದ 10ನೇ ತರಗತಿ ತಲುಪುತ್ತಾರೆ. 10ನೇ ತರಗತಿಯ ಎಸ್.ಎಸ್.ಎಲ್.ಸಿ ಪರೀಕ್ಷೆಯು ವಿದ್ಯಾರ್ಥಿಗಳಿಗೊಂದು ಪ್ರಮುಖ ಘಟ್ಟವಾಗಿರುತ್ತದೆ.

ರಾಜ್ಯದ ಎಲ್ಲಾ ಪ್ರೌಢಶಾಲೆಗಳಲ್ಲಿನ ಕಳೆದ ಶೈಕ್ಷಣಿಕ ಸಾಲಿನ ಎಸ್.ಎಸ್.ಎಲ್.ಸಿ.ಫಲಿತಾಂಶವನ್ನು ಅವಲೋಕಿಸಿದಾಗ ಸಾಕಷ್ಟು ಪ್ರೌಢಶಾಲೆಗಳಲ್ಲಿ ನಿರೀಕ್ಷಿತ ಫಲಿತಾಂಶ ಕಾಯ್ದುಕೊಳ್ಳದೆ ಇರುವುದನ್ನು ಗಮನಿಸಲಾಗಿದೆ. ಈ ಕುರಿತು ಯಾವ ಹಂತದಲ್ಲಿ ವಿಫಲವಾಗಿದೆ ಎಂಬ ಅಂಶದ ಬಗ್ಗೆ ಇಲಾಖೆಯು ಆತ್ಮಾವಲೋಕನ ನಡೆಸಬೇಕಾಗಿದೆ.

ಈ ಸಂಬಂಧ 2019-20ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಗಳ ಪೂರ್ವಭಾವಿ ಪ್ರಕ್ರಿಯೆ ಹಾಗೂ ಪರೀಕ್ಷಾ ಫಲಿತಾಂಶವನ್ನು ಉತ್ತಮ ಪಡಿಸುವ ಗುಣಾತ್ಮಕ ಕ್ರಮಗಳ ಬಗ್ಗೆ ಮತ್ತು ವಿದ್ಯಾರ್ಥಿಗಳಲ್ಲಿ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಮಾನ್ಯ ಶಿಕ್ಷಣ ಸಚಿವರು ದಿನಾಂಕ: 08.11.2019ರಂದು ಬೆಳಗ್ಗೆ 11.00 ಗಂಟೆಗೆ ವಿಕಾಸಸೌಧದ ಸಭಾಂಗಣದಿಂದ ವಿಡಿಯೋ ಸಂವಾದ ನಡೆಸಲಿದ್ದಾರೆ.

ಪರೀಕ್ಷಾ ಫಲಿತಾಂಶವನ್ನು ಉತ್ತಮ ಪಡಿಸುವ ಗುಣಾತ್ಮಕ ಕ್ರಮಗಳ ಬಗ್ಗೆ ಮತ್ತು ವಿದ್ಯಾರ್ಥಿಗಳಲ್ಲಿ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸಲು ಈಗಾಗಲೆ ಅಗತ್ಯ ಕ್ರಮಗಳನ್ನು ತೆಗೆದುಕೊಂಡಿದ್ದಲ್ಲಿ 10ನಿಮಿಷಕ್ಕೆ ಮೀರದ ಒಂದು ಪ್ರಾತ್ಯಕ್ಷಿಕೆಯನ್ನು ಅಥವಾ ಈವರೆಗೂ ಯಾವುದೇ ಕ್ರಮಗಳನ್ನು ತೆಗೆದುಕೊಳ್ಳದೆ ಇದ್ದಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಇಲಾಖೆಯ ಇತರೆ ಅಧಿಕಾರಿಗಳು ಹಾಗೂ ಶಿಕ್ಷಣ ತಜ್ಞರೊಂದಿಗೆ ಚರ್ಚಿಸಿ ಅನುಷ್ಠಾನಗೊಳಿಸಬಹುದಾದ ಯೋಜನೆಯನ್ನು ತಯಾರಿಸಿ ಮಾನ್ಯ ಶಿಕ್ಷಣ ಸಚಿವರು ನಡೆಸಲಿರುವ ವಿಡಿಯೋ ಸಂವಾದದಲ್ಲಿ 10ನಿಮಿಷಕ್ಕೆ ಮೀರದ ಪ್ರಾತ್ಯಕ್ಷಿಕೆಯನ್ನು ನೀಡಲು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳನ್ನು ಈಗಾಗಲೆ ಉಲ್ಲೇಖ [2]ರ ಈ ಕಛೇರಿಯ ಅರೆಸರ್ಕಾರಿ ಪತ್ರದಲ್ಲಿ ಕೋರಲಾಗಿದೆ.

ಸಂಬಂಧಿಸಿದ ಪತ್ರದ ಪ್ರತಿಯನ್ನು ರಾಜ್ಯದ ಎಲ್ಲಾ ಉಪನಿರ್ದೇಶಕರು [ಆಡಳಿತ] ಮತ್ತು [ಅಭಿವೃದ್ಧಿ] ಇವರುಗಳಿಗೆ ಈಗಾಗಲೇ ಕಳುಹಿಸಲಾಗಿದೆ.

ಆದ್ದರಿಂದ ಪ್ರಸ್ತಾಪಿತ ವಿಚಾರದಲ್ಲಿ ಉಲ್ಲೇಖ [2]ರ ಈ ಕಛೇರಿಯ ಪತ್ರದಲ್ಲಿನ ನಿರ್ದೇಶನದಂತೆ ತಮ್ಮ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳನ್ನು ಸ್ವಯಂ ಭೇಟಿ ಮಾಡಿ ತಮ್ಮ ಜಿಲ್ಲೆಗೆ ಸಂಬಂಧಿಸಿದ ಸೂಕ್ತವಾದ ಮತ್ತು ಅತ್ಯುತ್ತಮವಾದ ಯೋಜನೆಯನ್ನು ತಯಾರಿಸಲು ಎಲ್ಲಾ ರೀತಿಯ ಸಹಕಾರವನ್ನು ನೀಡಲು ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು [ಆಡಳಿತ] ಮತ್ತು [ಅಭಿವೃದ್ಧಿ] ಇವರುಗಳಿಗೆ ತಿಳಿಸಿದೆ. ಮಾನ್ಯ ಶಿಕ್ಷಣ ಸಚಿವರು ನಡೆಸಲಿರುವ ವಿಡಿಯೋ ಸಂವಾದಕ್ಕೆ ಪ್ರತಿನಿಧಿಗಳನ್ನು ನಿಯೋಜಿಸಿದೆ ಖುದ್ದು ಹಾಜರಾಗಲೂ ಸಹ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು [ಆಡಳಿತ] ಮತ್ತು [ಅಭಿವೃದ್ಧಿ] ಇವರುಗಳಿಗೆ ತಿಳಿಸಿದೆ.

ನಿರ್ದೇಶಕರು [ಪ್ರೌಢ ಶಿಕ್ಷಣ]
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಪ್ರತಿಯನ್ನು:-

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಸಕಾಲ ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು ಇವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ.
2. ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ], ಶಿಕ್ಷಣ ಇಲಾಖೆ ಸಚಿವಾಲಯ, ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ
3. ಮಾನ್ಯ ರಾಜ್ಯಯೋಜನಾನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ
4. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ ಕಲಬುರಗಿ
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹನಿರ್ದೇಶಕರುಗಳಿಗೆ ಮಾಹಿತಿಗಾಗಿ
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಅಭಿವೃದ್ಧಿ ರವರಿಗೆ ಸೂಕ್ತ ಕ್ರಮಕ್ಕಾಗಿ
8. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ
9. ಹಿರಿಯ ಸಹಾಯಕ ನಿರ್ದೇಶಕರು ಇ- ಆಡಳಿತ ಶಾಖೆ ಆಯುಕ್ತರ ಕಛೇರಿ ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಉಲ್ಲೇಖ [1] ಮತ್ತು [2]ರ ಪ್ರತಿಗಳನ್ನು ಕಳುಹಿಸುತ್ತಾ ಮಾನ್ಯ ಸಚಿವರು ನಡೆಸಲಿರುವ ವಿಡಿಯೋ ಸಂವಾದಕ್ಕೆ ಎಲ್ಲಾ ರೀತಿಯ ಪೂರ್ವಭಾವಿ ಕ್ರಮಗಳನ್ನು ಕೈಗೊಳ್ಳಲು ಮತ್ತು ಪೂರ್ಣ ಪ್ರಮಾಣದ ಸಹಕಾರವನ್ನು ನೀಡಲು ತಿಳಿಸಿದೆ.
10. ಕಛೇರಿ ಪ್ರತಿ